# ಗೃಹರಕ್ಷಕ ಹಾಗೂ ಪೌರರಕ್ಷಣಾ ಇಲಾಖೆ

**ಬೋಧಕ ಹಾಗೂ ಸಹಾಯಕ ಬೋಧಕ** (INSTRUCTOR AND ASSISTANT INSTRUCTOR) **ಹುದ್ದೆಗಳ ನೇಮಕಾತಿ**

**(ISO: 9001-2015 ಪ್ರಮಾಣಿತ ನೇಮಕಾತಿ ಪ್ರಕ್ರಿಯೆ)**

**ಅಧಿಸೂಚನೆ ಸಂಖ್ಯೆ: 77/ನೇಮಕಾತಿ–2/2018–19**

ವಿಷಯ: ಬೋಧಕ ಹಾಗೂ ಸಹಾಯಕ ಬೋಧಕ (INSTRUCTOR AND ASSISTANT INSTRUCTOR) ಹುದ್ದೆಗಳ ನೇರ ನೇಮಕಾತಿ–2018 ಕುರಿತು.

ಉಲ್ಲೇಖ: ಅಧಿಸೂಚನೆ ಸಂಖ್ಯೆ: 77/ನೇಮಕಾತಿ–2/2018–19

~*~*~*~

ಉಲ್ಲೇಖಿತ ಅಧಿಸೂಚನೆಯನ್ವಯ ಕರ್ನಾಟಕ ರಾಜ್ಯದ, **ಗೃಹರಕ್ಷಕ ಹಾಗೂ ಪೌರರಕ್ಷಣಾ ಇಲಾಖೆ**ಯಲ್ಲಿ ಖಾಲಿ ಇರುವ **ಬೋಧಕ ಹಾಗೂ ಸಹಾಯಕ ಬೋಧಕ** (INSTRUCTOR AND ASSISTANT INSTRUCTOR) **ಹುದ್ದೆಗಳ** ನೇರ ನೇಮಕಾತಿ ಸಲುವಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ. ಅರ್ಜಿಯನ್ನು ಆನ್‌ಲೈನ್ ಮುಖಾಂತರ ಸಲ್ಲಿಸಲು ಕೊನೆಯ ದಿನಾಂಕವನ್ನು 15.02.2019 ಸಂಜೆ 06.00 ಗಂಟೆಯವರೆಗೆ ಮತ್ತು ಶುಲ್ಕವನ್ನು ಹೆಚ್.ಡಿ.ಎಫ್.ಸಿ ಬ್ಯಾಂಕಿನ ಅಧಿಕೃತ ಶಾಖೆಗಳಲ್ಲಿ ಅಥವಾ ಸ್ಥಳೀಯ ಅಂಚೆ ಕಚೇರಿಗಳ ವೇಳೆಯಲ್ಲಿ ಪಾವತಿಸಲು ಕೊನೆಯ ದಿನಾಂಕ: 18.02.2019 ರಂದು ನಿಗದಿಗೊಳಿಸಲಾಗಿರುತ್ತದೆ. ಆಡಳಿತಾತ್ಮಕ ಕಾರಣಗಳಿಂದ ಹಾಗೂ ಅಭ್ಯರ್ಥಿಗಳ ಹಿತದೃಷ್ಟಿಯಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ವಿಸ್ತರಿಸಲು ತೀರ್ಮಾನಿಸಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು 15.02.2019 ರಿಂದ 25.02.2019 ರವರೆಗೆ ಮತ್ತು ಶುಲ್ಕವನ್ನು ಅಧಿಕೃತ ಬ್ಯಾಂಕ್ ಅಥವಾ ಸ್ಥಳೀಯ ಅಂಚೆ ಕಚೇರಿಗಳ ವೇಳೆಯಲ್ಲಿ ಪಾವತಿಸುವ ದಿನಾಂಕವನ್ನು 18.02.2019 ರಿಂದ 27.02.2019 ರವರೆಗೆ ವಿಸ್ತರಿಸಲಾಗಿದೆ. ಉಲ್ಲೇಖಿತ ಅಧಿಸೂಚನೆಯಲ್ಲಿ ನೀಡಲಾಗಿರುವ ಇತರೆ ಅರ್ಹತಾ ಷರತ್ತುಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ. ಆದರೆ ಅಭ್ಯರ್ಥಿಗಳ ವಯೋಮಿತಿ ಮತ್ತು ವಿದ್ಯಾರ್ಹತೆಗೆ ವಿಸ್ತರಿಸಿದ ದಿನಾಂಕವಾದ 25.02.2019ನ್ನು ಕೊನೆಯ ದಿನಾಂಕವಾಗಿ ಪರಿಗಣಿಸಲಾಗುವುದು ಹಾಗೂ ಈಗಾಗಲೇ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಉಲ್ಲೇಖಿತ ಅಧಿಸೂಚನೆಯಲ್ಲಿ ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿದ್ದ ಕೊನೆಯ ದಿನಾಂಕವನ್ನೆ ಅರ್ಹತಾ ದಿನಾಂಕವಾಗಿ ಪರಿಗಣನೆಗೆ ತೆಗೆದುಕೊಳ್ಳಲಾಗುವುದು.

ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ, ಬೆಂಗಳೂರು–560 001.